ಸೋಮವಾರ 19.08.2025 ಬೆಂಗಳೂರು ಗ್ರಾಮಾಂತರ ಬೆಲೆ: 5ರೂ, 2 ಪುಟಗಳು ಸಂಪುಟ 01 - ಸಂಚಿಕೆ 27
Digital Varthe Kannada Daily Volume 01 - Issue 27 Monday 18.08.2025 Price: 5/- Rs 2 Pages Bangalore Rural

DIGITAL VARTHE
www.digitalvarthe.com

# ಡಿಜಿಟಲ್ ವಾರ್ತೆ

RNI: KNKAN/25/A1348 ಕನ್ನಡಿಗರ ಶಕ್ತಿ ಕನ್ನಡ ದಿನಪತ್ರಿಕೆ

ಅಭಿಷೇಕ್ ಚಿಕ್ಕಮಾರನಹಳ್ಳಿ
ಸಂಪಾದಕರು

ಪುರುಷೋತ್ತಮ್ ಬಿ.ಹೆಚ್
ವ್ಯವಸ್ಥಾಪಕರು

digitalvarthe@gmail.com

## ಮೊದಲು ಮುಸುಕುದಾರಿಯ ಮಂಪರು ಪರೀಕ್ಷೆ ಮಾಡಿ': ಕೈ ಶಾಸಕರ ಒತ್ತಾಯ





### ಸುಳ್ಳು ಆರೋಪ ಮಾಡಿದರೆ ಒಳಸಂಚು ಮಾಡಿದವರ ವಿರುದ್ಧ ಕ್ರಮ ಕೈಗೊಳ್ಳಬೇಕು

ಬೆಳಗಾವಿ: ದೇಶಾದ್ಯಂತ ವ್ಯಾಪಕ ಸುದ್ದಿಗೆ ಗ್ರಾಸವಾಗಿರುವ ಧರ್ಮಸ್ಥಳ ಪ್ರಕರಣಕ್ಕೆ ಸಂಬಂಧಿಸಿದಂತೆ ಮುಸುಕುದಾರಿ ಸಾಕ್ಷಿದಾರನ ವಿರುದ್ಧ ಕಿಡಿಕಾರಿರುವ ಕಾಂಗ್ರೆಸ್ ಶಾಸಕರೊಬ್ಬರು 'ಮೊದಲು ಆತನ ಮಂಪರು ಪರೀಕ್ಷೆ ಮಾಡಿ' ಎಂದು ಒತ್ತಾಯಿಸಿದ್ದಾರೆ.

ಧರ್ಮಸ್ಥಳ ಸಾಮೂಹಿಕ ಸಮಾಧಿ ಪ್ರಕರಣಕ್ಕೆ ಸಂಬಂಧಿಸಿದಂತೆ ವಿವಿಧ ಪ್ರದೇಶಗಳಲ್ಲಿ ನಡೆದಿರುವ ಶೋಧ ಕಾರ್ಯಾಚರಣೆಯಲ್ಲಿ ಮುಸುಕುದಾರಿ ದೂರುದಾರ ಹೇಳಿಕೊಂಡಂತೆ ದೊಡ್ಡ ಪ್ರಮಾಣದಲ್ಲಿ ಅಸ್ತಿಪಂಜರಗಳು ದೊರೆತಿಲ್ಲ. ಇದು ಆತನ ಆರೋಪಗಳ ಮೇಲೆಯೇ ಶಂಕೆ ಮೂಡುವಂತೆ ಮಾಡಿದ್ದು, ಇದೇ ವಿಚಾರವಾಗಿ ಕಾಂಗ್ರೆಸ್ ಶಾಸಕ ಲಕ್ಷ್ಮಣ್ ಸವದಿ ಕಿಡಿಕಾರಿದ್ದಾರೆ.

ಧರ್ಮಸ್ಥಳ ಬುರುಡೆ ಕೇಸ್‌ನ ಮುಸುಕುದಾರಿಯ ಮಂಪರು ಪರೀಕ್ಷೆಯನ್ನು ಮಾಡಬೇಕು ಎಂದು ಕೈ ಶಾಸಕ ಲಕ್ಷ್ಮಣ ಸವದಿ ಒತ್ತಾಯಿಸಿದ್ದು, ಅಥಣಿ ಪಟ್ಟಣದಲ್ಲಿ ಮಾಧ್ಯಮಗಳಿಗೆ ಹೇಳಿಕೆ ನೀಡಿದ ಅವರು, 'ಸುಳ್ಳು ಆರೋಪ ಮಾಡುವವರಿಗೆ ಇದು ಎಚ್ಚರಿಕೆ ಗಂಟೆ ಆಗಬೇಕು ಎಂದರು.

ಅಂತೆಯೇ ಮುಸುಕು ಧಾರಿಯನ್ನ ಇಟ್ಟುಕೊಂಡು ಒಳಸಂಚು ಮಾಡ್ತಿದ್ದಾರಾ ನೋಡಬೇಕು. ಯಾರಿಗೂ ಕಳಂಕ ತರುವ ಕೆಲಸ ಯಾರೂ ಮಾಡಿದರೂ ಒಳಸಂಚು ಮಾಡಿದವರ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಅಂತೆಯೇ ಮುಸುಕುದಾರಿ ಹಿನ್ನೆಲೆ ಏನು ಎನ್ನುವುದು ಪತ್ತೆಯಾಗಬೇಕು. ಇಲ್ಲಿಯವರೆಗೂ ಸರ್ಕಾರದ ಹಣ ಎಷ್ಟು ವೆಚ್ಚವಾಗಿದೆಯೋ ಅದನ್ನು ವಸೂಲಿ ಮಾಡಬೇಕು. ಮಂಪರು ಪರೀಕ್ಷೆಯಲ್ಲಿ ಅತನ ಒಪ್ಪಿಗೆ ಬೇಕಾಗುತ್ತದೆ. ಬೇರೆ ದಾರಿಯಲ್ಲಿ ತನಿಖೆ ಮಾಡಿ ಸಂಚು ಮಾಡಿದವರ ವಿರುದ್ಧ ಕ್ರಮ ಕೈಗೊಳ್ಳಬೇಕು. ಇದು ಸರ್ಕಾರ ಅಥವಾ ಪಕ್ಷದ ನಿಲುವಲ್ಲ ಇದು ನನ್ನ ವೈಯಕ್ತಿಕ ಹೇಳಿಕೆ ಎಂದು ಸವದಿ ಹೇಳಿದ್ದಾರೆ.

## ಲೋಕಾಯುಕ್ತ ಬಲೆಗೆ ಬಿದ್ದ ಇಬ್ಬರು ಪೊಲೀಸ್



AI ನಿರ್ಮಿತ ಚಿತ್ರ

### ಪೊಲೀಸ್ ಇನ್ಸ್‌ಪೆಕ್ಟರ್, ಸಬ್‌ಇನ್ಸ್‌ಪೆಕ್ಟರ್ ಹಾಗೂ ಒಬ್ಬ ಖಾಸಗಿ ವ್ಯಕ್ತಿ ಬಂಧನ

ಬೆಂಗಳೂರು: ರಾಮಮೂರ್ತಿ ನಗರ ಪೊಲೀಸ್ ಠಾಣೆಯ ಇಬ್ಬರು ಪೊಲೀಸ್ ಅಧಿಕಾರಿಗಳು ಮತ್ತು ಒಬ್ಬ ಖಾಸಗಿ ವ್ಯಕ್ತಿ 1 ಲಕ್ಷ ರೂ. ಲಂಚ ಪಡೆಯುತ್ತಿದ್ದಾಗ ರೆಡ್ ಹ್ಯಾಂಡ್ ಆಗಿ ಸಿಕ್ಕಿಬಿದ್ದಿದ್ದಾರೆ ಎಂದು ಲೋಕಾಯುಕ್ತ ಅಧಿಕಾರಿಗಳು ಭಾನುವಾರ ತಿಳಿಸಿದ್ದಾರೆ.

ಆರೋಪಿಗಳನ್ನು ಪೊಲೀಸ್ ಇನ್ಸ್‌ಪೆಕ್ಟರ್ ರಾಜಶೇಖರ್ (48), ಸಬ್ ಇನ್ಸ್‌ಪೆಕ್ಟರ್ ರುಮಾನ್ ಪಾಷಾ (32) ಮತ್ತು ದೇವರ ಜೀವನಹಳ್ಳಿಯ ಇಮ್ರಾನ್ ಬಾಬು (32) ಎಂದು ಗುರುತಿಸಲಾಗಿದೆ.ಕೇಳಿದ್ದ ಹಣದಲ್ಲಿ 1 ಲಕ್ಷ ರೂ. ಪಡೆಯುತ್ತಿದ್ದಾಗ ಶನಿವಾರ ಸಿಕ್ಕಿಬಿದ್ದಿದ್ದು, ಹಣವನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಲೋಕಾಯುಕ್ತ ಅಧಿಕಾರಿಗಳು ತಿಳಿಸಿದ್ದಾರೆ.

ಕೆಆರ್ ಪುರಂ ನಿವಾಸಿ ಮಂಜುನಾಥ್ (47) ಎಂಬುವವರು ಲೋಕಾಯುಕ್ತ ಅಧಿಕಾರಿಗಳನ್ನು ಸಂಪರ್ಕಿಸಿ, ಆಭರಣ ಮತ್ತು ನಗದು ಕಾಣೆಯಾದ ಬಗ್ಗೆ ಮನೆ ವಿವಾದಕ್ಕೆ ಸಂಬಂಧಿಸಿದ ದೂರಿನ ತನಿಖೆಗಾಗಿ ಆರೋಪಿಗಳು 2 ಲಕ್ಷ ರೂ. ಬೇಡಿಕೆ ಇಟ್ಟಿದ್ದಾರೆ ಎಂದು ಆರೋಪಿಸಿದ್ದಾರೆ.

## ಒಳಮೀಸಲಾತಿ ಜಾರಿಯಾಗದಿದ್ದರೆ ಮಾಡು ಇಲ್ಲವೇ ಮಡಿ ಹೋರಾಟ: ಸಂಸದ ಗೋವಿಂದ ಕಾರಜೋಳ



ವಿಜಯಪುರ: ಆಗಸ್ಟ್ 19 ರಂದು ನಡೆಯಲಿರುವ ವಿಶೇಷ ಸಚಿವ ಸಂಪುಟ ಸಭೆಯಲ್ಲಿ ಒಳ ಮೀಸಲಾತಿ ಜಾರಿಯಾಗದಿದ್ದರೆ 'ಮಾಡು ಇಲ್ಲವೇ ಮಡಿ' ಹೋರಾಟ ಆರಂಭಿಸುತ್ತೇವೆಂದು ಮಾಜಿ ಉಪಮುಖ್ಯಮಂತ್ರಿ ಮತ್ತು ಬಿಜೆಪಿ ಸಂಸದ ಗೋವಿಂದ ಕಾರಜೋಳ ಅವರು ಶನಿವಾರ ಹೇಳಿದ್ದಾರೆ. ಶನಿವಾರ (ಆ.16) ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯದಲ್ಲಿ ಮೀಸಲಾತಿ ಸಂಬಂಧ ಹಾವನೂರ ವರದಿ, ಸದಾಶಿವ ವರದಿ, ಕಾಂತರಾಜ ವರದಿ, ಮಾಧುಸ್ವಾಮಿ ವರದಿ ಹಾಗೂ ನಾಗಮೋಹನದಾಸ ವರದಿ ಇದ್ದು, ಎಲ್ಲವೂ ವೈಜ್ಞಾನಿಕವಾಗಿವೆ. ಅದರಲ್ಲೂ, ಮಾಧುಸ್ವಾಮಿ ವರದಿ ಹೊರತುಪಡಿಸಿ ಉಳಿದ ನಾಲ್ಕು ಆಯೋಗಗಳನ್ನೂ ಕಾಂಗ್ರೆಸ್ ನೇಮಕ ಮಾಡಿದೆ. ಎಲ್ಲಾ ವರದಿಗಳ ಮಾಹಿತಿ ಸಹ ಸರ್ಕಾರದಲ್ಲೇ ಇದ್ದು, ಐದರಲ್ಲಿ ಯಾವುದಾರೂ ಒಂದನ್ನು ಜಾರಿ ಮಾಡಿದರೂ, ಅದಕ್ಕೆ ನಮ್ಮ ಸಮ್ಮತಿ ಇದೆ. ಎಲ್ಲಾ ಸಮುದಾಯಗಳಿಗೆ ಒಳ ಮೀಸಲಾತಿ ನೀಡಲು ನ್ಯಾಯ ಒದಗಿಸಲು ವರದಿಯಲ್ಲಿ ಕೆಲವು ತಿದ್ದುಪಡಿಗಳನ್ನು ಮಾಡಿದರೂ ಅದಕ್ಕೆ ನಮ್ಮ ಯಾವುದೇ ಆಕ್ಷೇಪವಿರುವುದಿಲ್ಲ ಎಂದು ಹೇಳಿದ್ದಾರೆ,

ನ್ಯಾ.ನಾಗಮೋಹನದಾಸ ಅವರು ಜಾತಿಗಳ ಹಿಂದುಳಿಯುವಿಕೆ ಆಧಾರದ ಮೇಲೆ ತಮ್ಮ ವರದಿಯಲ್ಲಿ ಗುಂಪುಗಳನ್ನು ಮಾಡಿದ್ದಾರೆ. ಇದು ವೈಜ್ಞಾನಿಕವಾಗಿದೆ. ಅಸ್ಪೃಶ್ಯರಲ್ಲಿ ಅತಂತ್ಯ ಹಿಂದುಳಿದವರಿಗೆ ಶೇ.1ರಷ್ಟು, ಹೆಚ್ಚು ಹಿಂದುಳಿದ ಮಾದಿಗ ಸಮುದಾಯಕ್ಕೆ ಶೇ.6ರಷ್ಟು, ಹಿಂದುಳಿದ ಹೊಲೆಯ ಸಮುದಾಯಕ್ಕೆ ಶೇ.5ರಷ್ಟು, ಕಡಿಮೆ ಹಿಂದುಳಿದ ಕೊರಮ, ಕೊರಚ ಜನಾಂಗಕ್ಕೆ ಶೇ.4ರಷ್ಟು ಹಾಗೂ ಆದಿ ಆಂಧ್ರ, ಆದಿ ಕರ್ನಾಟಕ ಮತ್ತು ಜಾತಿಯನ್ನೇ ಹೇಳದವರಿಗೆ ಶೇ.1ರಷ್ಟು ಮೀಸಲು ನಿಗದಿ ಮಾಡಿದ್ದಾರೆ. ಈ ವರದಿಯನ್ನು ಸಂವಿಧಾನ ಮತ್ತು 2014ರ ಏಪ್ರಿಲ್ 1ರ ಸುಪ್ರೀಂ ಕೋರ್ಟ್ ನೀಡಿದ ತೀರ್ಪನ್ನು ಮುಂದಿಟ್ಟುಕೊಂಡು ನೋಡಿದಾಗ ಅರ್ಥವಾಗುತ್ತದೆ.

ಆದರೆ, ರಾಜ್ಯ ಸರ್ಕಾರ ಗೊಂದಲ ಸೃಷ್ಟಿ ಮಾಡುವುದು ಸರಿಯಲ್ಲ. ಜಗಳ ಹಚ್ಚುವ ಕೆಲಸವನ್ನು ಕಾಂಗ್ರೆಸ್ ಬಿಡಬೇಕು. ನಾವು ಯಾರಿಗೂ ಅನ್ಯಾಯ ಮಾಡಲು ಹಾಗೂ ತೆಗೆದುಹಾಕಲು ಹೇಳುವುದಿಲ್ಲ. ಸರ್ಕಾರ ತಂದೆ ಸ್ಥಾನದಲ್ಲಿ ನಿಂತು ಅವರವರ ಪಾಲನ್ನು ಕೊಡಬೇಕು. ಒಳ ಮೀಸಲಾತಿಯಿಂದ ಯಾರೂ ವಂಚಿತರಾಗಬಾರದು. ವರದಿಯಲ್ಲಿ ತಿದ್ದುಪಡಿ ಮಾಡುವ ಅವಶ್ಯಕತೆಯಿದ್ದರೆ, ಅದನ್ನಾದರೂ ಮಾಡಿ ಒಳ ಮೀಸಲಾತಿ ಜಾರಿ ಮಾಡಬೇಕು. ನಮ್ಮದು ಯಾವುದೇ ತಕರಾರಿಲ್ಲ.

ಈಗಾಗಲೇ ನೆರೆಯ ಆಂಧ್ರ ಮತ್ತು ತೆಲಂಗಾಣದಲ್ಲಿ ಒಳಮೀಸಲಾತಿ ಅನುಷ್ಠಾನಗೊಳಿಸಲಾಗಿದೆ. ಆದರೆ, ರಾಜ್ಯದಲ್ಲಿ ಮಲ್ಲಿಕಾರ್ಜುನ ಖರ್ಗೆ, ಸಿಎಂ ಸಿದ್ದರಾಮಯ್ಯ ತಮ್ಮದೇ ಕಾಂಗ್ರೆಸ್ ಪ್ರಣಾಳಿಕೆಯಲ್ಲಿ ಒಳಮೀಸಲಾತಿ ಜಾರಿಗೊಳಿಸುವುದಾಗಿ ನೀಡಿದ ಭರವಸೆಯನ್ನು ಯಾಕೆ ಈಡೇರಿಸುತ್ತಿಲ್ಲ? ನುಡಿದಂತೆ ನಡೆದ ಸರ್ಕಾರ ಅಂದರೆ ಇದೇನಾ? ಆ.16ರಂದೇ ವಿಶೇಷ ಸಚಿವ ಸಂಪುಟ ಸಭೆ ನಿಗದಿ ಮಾಡಿ ಮುಂದೂಡಲು ಕಾರಣವೇನು? ಎಲ್ಲಾ ಜಾತಿಯವರು ರಸ್ತೆಯಲ್ಲಿ ಹೊಡೆದಾಡುಕೊಂಡು ಹೋಗಬೇಕು ಎಂಬ ಕಾಂಗ್ರೆಸ್‌ನ ಒಡೆದು ಆಳುವ ನೀತಿ ಖಂಡನೀಯವಾಗಿದೆ. ಒಳ ಮೀಸಲಾತಿಯು ಮತ ಬ್ಯಾಂಕ್ ರಾಜಕಾರಣಕ್ಕೆ ಅಲ್ಲ. ಸಾಮಾಜಿಕ ನ್ಯಾಯದ ದೃಷ್ಟಿಯಿಂದ ಇದನ್ನು ಜಾರಿ ಮಾಡಬೇಕು. ಮಾಡದಿದ್ದರೆ, ಕಾಂಗ್ರೆಸ್ ಸರ್ಕಾರದ ವಿರುದ್ಧ 'ಮಾಡು ಇಲ್ಲವೇ ಮಡಿ' ಆಂದೋಲನವನ್ನು ಪ್ರಾರಂಭಿಸುವುದನ್ನು ಬಿಟ್ಟು ನಮಗೆ ಬೇರೆ ದಾರಿಯಿಲ್ಲ ಎಂದು ಗುಡುಗಿದರು.

## ನೆಲಮಂಗಲದಲ್ಲಿ ನಾಟಿ ಹೋರಿಗಳ ಕ್ರೂರ ಹತ್ಯೆ ಪ್ರಕರಣ – ಮೂವರು ಬಂಧನ



ಆರೋಪಿ ಇಮ್ರಾನ್



ಆರೋಪಿ ಸಯ್ಯದ್ ನವಾಜ್



ಆರೋಪಿ ವೆಂಕಟೇಶ್ @ ಮಹಮ್ಮದ್ ಶುಯಾಬ್

### ಅರಳಸಂದ್ರ ಗ್ರಾಮದಲ್ಲಿ ನಡೆದ ಘಟನೆಯನ್ನು ಗ್ರಾಮಾಂತರ ಪೊಲೀಸರು ಬೇಡಿಸಿದ್ದಾರೆ

ನೆಲಮಂಗಲ: ಇತ್ತೀಚಿಗೆಯಷ್ಟೇ ಅರಳಸಂದ್ರ ಗ್ರಾಮದಲ್ಲಿ ನಾಟಿ ಹೋರಿಗಳ ಕತ್ತು ಕೊಯ್ದು ನಡುರಸ್ತೆಯಲ್ಲಿ ಎಸೆದು ಪರಾರಿಯಾಗಿದ್ದ ಆರೋಪಿಗಳನ್ನು ನೆಲಮಂಗಲ ಗ್ರಾಮಾಂತರ ಪೊಲೀಸರು ಬಂಧಿಸಿದ್ದಾರೆ.

ಬೆಂಗಳೂರಿನ ಎಂಎಸ್ ಪಾಳ್ಯದ ನಿವಾಸಿ ಇಮ್ರಾನ್ (30), ಬೆಂಗಳೂರಿನ ಮಹಮ್ಮದ್ ಸಾಬ್ ಪಾಳ್ಯದ ನಿವಾಸಿ ಸಯ್ಯದ್ ನವಾಜ್ (35), ಬೆಂಗಳೂರಿನ ಎಂಎಸ್ ಪಾಳ್ಯದ ಶ್ರೀನಿಧಿ ಬಡಾವಣೆಯ ನಿವಾಸಿ ವೆಂಕಟೇಶ್ ಅಲಿಯಾಸ್ ಮಹಮ್ಮದ್ ಶುಯಾಬ್ (20) ಬಂಧಿತ ಆರೋಪಿಗಳು.

ಕಳೆದ ಆ. 11ರಂದು ನೆಲಮಂಗಲ ತಾಲ್ಲೂಕಿನ ಅರಳಸಂದ್ರ ಗ್ರಾಮದ ಕುಮುದ್ವತಿಗೆ ಅಡ್ಡಲಾಗಿ ನಿರ್ಮಿಸಿರುವ ಸೇತುವೆಯ ನಡುರಸ್ತೆಯಲ್ಲಿ ಎರಡು ಹಳ್ಳಿಕಾರ್ ತಳಿಯ ನಾಟಿ ಹೋರಿಗಳ ಕತ್ತು ಕೊಯ್ದು ಎಸೆದು ದುಷ್ಕರ್ಮಿಗಳು ಹೋಗಿದ್ದರು. ನಾಟಿ ಹೋರಿಗಳ ಮೈಯೆಲ್ಲಾ ಗಾಯಗಳ ಗುರುತು ಕಂಡುಬಂದಿದ್ದವು. ಈ ಘಟನೆ ಸಾರ್ವಜನಿಕ ವಲಯದಲ್ಲಿ ಸಾಕಷ್ಟು ಚರ್ಚೆಯಾಗಿ ಸಾಕಷ್ಟು ಆಕ್ರೋಶ ಹೊರಹಾಕಿದ್ದರು.

ಆ.10ರಂದು ಮಧ್ಯರಾತ್ರಿ ಟೆಂಪೋ ಮೂಲಕ ಬೆಂಗಳೂರಿನಿಂದ ಕೇರಳಗೆ ಹಸುಗಳನ್ನ ರಫ್ತು ಮಾಡುತ್ತಿದ್ದಾಗ ಕಸಾಯಿಖಾನೆಗಳಿಗೆ ಸಾಗಿಸುವಾಗ ಎರಡು ಹಸುಗಳು ತಿನ್ನಲು ಮಾಂಸಕ್ಕೆ ಯೋಗ್ಯವಲ್ಲ ಎಂದು ತಿಳಿದು ಹೋರಿಗಳ ಕತ್ತುಕೂಯ್ದು ನಡುರಸ್ತೆಯಲ್ಲೇ ಎಸೆದು ಪರಾರಿಯಾಗಿದ್ದರು. ಈ ಘಟನೆಗೆ ಸಂಬಂಧಿಸಿದಂತೆ ನೆಲಮಂಗಲ ಗ್ರಾಮಾಂತರ ಪೊಲೀಸರು ಆರೋಪಿಗಳ ಪತ್ತೆಗೆ ಬಲೆ ಬೀಸಿದಾಗ ಟೆಂಪೋ ಮಾಹಿತಿ ಸಿಕ್ಕಿದ್ದು ಪತ್ತೆ ಹಚ್ಚಿ ಆರೋಪಿಗಳನ್ನು ಬಂಧಿಸಿದ್ದಾರೆ



## ನಿಂತಿದ್ದ ಲಾರಿಗೆ ಕೆಎಸ್‌ಆರ್‌ಟಿಸಿ ಬಸ್ ಡಿಕ್ಕಿ: ಇಬ್ಬರು ಸಾವು, 12 ಮಂದಿಗೆ ಗಾಯ

ಬಳ್ಳಾರಿ: ಇಲ್ಲಿ ಸಮೀಪದಲ್ಲಿ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ (ಕೆಎಸ್‌ಆರ್‌ಟಿಸಿ) ಬಸ್ ನಿಂತಿದ್ದ ಲಾರಿಗೆ ಡಿಕ್ಕಿ ಹೊಡೆದ ಪರಿಣಾಮ ಇಬ್ಬರು ಪ್ರಯಾಣಿಕರು ಸಾವಿಗೀಡಾಗಿದ್ದು, 12 ಮಂದಿ ಗಾಯಗೊಂಡಿದ್ದಾರೆ ಎಂದು ಪೊಲೀಸರು ಭಾನುವಾರ ತಿಳಿಸಿದ್ದಾರೆ. ಮೃತರನ್ನು ರಾಮನಗರ ಜಿಲ್ಲೆಯ ಕನಕಪುರ ತಾಲ್ಲೂಕಿನ ಚೌಡಸಂದ್ರ ಗ್ರಾಮದ ನಿವಾಸಿ ಬಾಲಾನಾಯಕ್ (46) ಮತ್ತು ಮಂಡ್ಯ ಜಿಲ್ಲೆಯ ಮಳವಳ್ಳಿ ತಾಲ್ಲೂಕಿನ ಶ್ವೇತಾ (42) ಎಂದು ಗುರುತಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ.

ಶನಿವಾರ ರಾತ್ರಿ ಮಸ್ಕಿಯಿಂದ ಬೆಂಗಳೂರಿಗೆ ತೆರಳುತ್ತಿದ್ದ ಬಸ್ ಚಾಲಕನ ನಿಯಂತ್ರಣ ತಪ್ಪಿ ಬೈರಾಪುರ ಕ್ರಾಸ್ ಬಳಿ ನಿಂತಿದ್ದ ಲಾರಿಗೆ ಡಿಕ್ಕಿ ಹೊಡೆದಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಗಾಯಾಳುಗಳನ್ನು ಬಳ್ಳಾರಿ ಟ್ರಾಮಾ ಕೇರ್ ಸೆಂಟರ್ ಮತ್ತು ಸಿರುಗುಪ್ಪ ತಾಲೂಕು ಆಸ್ಪತ್ರೆಗೆ ದಾಖಲಿಸಲಾಗಿದೆ.

ಪ್ರಾಥಮಿಕ ತನಿಖೆಯಲ್ಲಿ ಚಾಲಕನ ಅತಿ ವೇಗವೇ ಅಪಘಾತಕ್ಕೆ ಕಾರಣ ಎಂದು ತಿಳಿದುಬಂದಿದೆ. ಮೃತದೇಹಗಳನ್ನು ಮರಣೋತ್ತರ ಪರೀಕ್ಷೆಗಾಗಿ ಸಿರುಗುಪ್ಪ ಸರ್ಕಾರಿ ಆಸ್ಪತ್ರೆಗೆ ರವಾನಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಸಿರುಗುಪ್ಪ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಸುದ್ದಿ ಮತ್ತು ಜಾಹೀರಾತುಗಳಿಗಾಗಿ ಸಂಪರ್ಕಿಸಿ:
9538786812 / 9880655634


Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.

ಡಿಜಿಟಲ್ ವಾರ್ತೆ

# ರಾಧಾ ಕೃಷ್ಣ ವೇಷಧಾರಿಗಳಾಗಿ ಬಣ್ಣ ಬಣ್ಣದ ಉಡುಗೆ ತೊಟ್ಟ ಚಿಣ್ಣರು




ಬೆಂಗಳೂರಿನ ಕುಕ್ಕನಹಳ್ಳಿ ನಿವಾಸಿ ಪ್ರಶಾಂತ್ ಪುತ್ರ ರಾಘವ್ ವರ್ಮಾ





ನಾಯಸಿಂಗನಹಳ್ಳಿ ಭಾವನಾ ಗಗನ್ ಮಕ್ಕಳಾದ ಯದುವೀರ್ ಗೌಡ ಹಾಗೂ ಚಿಂತನ್ ಗೌಡ




ನೆಲಮಂಗಲದ ತನುಜಾ ಮಂಜೇಶ್ ಪುತ್ರ ಹೃತ್ವಿಕ್ ರಾಜ್



ನೆಲಮಂಗಲದ ಚೈತ್ರಾ ಅಭಿಷೇಕ್ ಪುತ್ರ ಅಚಿತ್ ರಾಜರತ್ನ

# ಅಕ್ರಮ ಸಂಬಂಧಕ್ಕೆ ಒಪ್ಪದ ಬಾಲ್ಯದ ಗೆಳತಿಗೆ 9 ಬಾರಿ ಇರಿದು ಕೊಂದ ಪ್ರಿಯಕರ!





ಬೆಳಗಾವಿ: ಅಕ್ರಮ ಸಂಬಂಧಕ್ಕೆ ಒಪ್ಪದ ಬಾಲ್ಯದ ಗೆಳತಿಯನ್ನು ಮನಸೋಇಚ್ಚೆ ಚೂರಿಯಿಂದ ಇರಿದು ಕೊಲೆ ಮಾಡಿರುವ ಘಟನೆ ಬೆಳಗಾವಿ ಜಿಲ್ಲೆಯ ಖಾನಾಪುರ ತಾಲೂಕಿನ ಬೀಡಿ ಗ್ರಾಮದಲ್ಲಿ ನಡೆದಿದೆ. ಎರಡು ಮಕ್ಕಳ ತಾಯಿ 30 ವರ್ಷದ ರೇಷ್ಮಾ ಎಂಬಾಕೆಯನ್ನು ತನ್ನೊಂದಿಗೆ ಅಕ್ರಮ ಸಂಬಂಧ ಹೊಂದುವಂತೆ ಪೀಡಿಸುತ್ತಿದ್ದನು. ಆಕೆ ಬೇಡ ಅಂದಿದ್ದಕ್ಕೆ 31 ವರ್ಷದ ಆನಂದ್ ಸುತಾರ್ ರೇಷ್ಮಾಗೆ ಚೂರಿಯಿಂದ 9 ಬಾರಿ ಇರಿದು ನಂತರ ತಾನೂ ಅದೇ ಚೂರಿಯಿಂದ ಕತ್ತು ಸೀಳಿಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾನೆ.

ಒಂದೇ ಗ್ರಾಮದವರಾಗಿದ್ದರಿಂದ ರೇಷ್ಮಾ ಮತ್ತು ಆನಂದ ನಡುವೆ ಚಿಕ್ಕ ವಯಸ್ಸಿನಿಂದಲೂ ಸಲುಗೆ ಇತ್ತು. ದೊಡ್ಡವರಾಗುತ್ತಿದ್ದಂತೆ ಇಬ್ಬರ ನಡುವೆ ಪ್ರೀತಿ ಚಿಗುರಿತ್ತು. ಈ ವಿಚಾರ ರೇಷ್ಮಾ ಅವರ ಮನೆಯಲ್ಲಿ ಗೊತ್ತಾಗುತ್ತಿದ್ದಂತೆ, ಪೋಷಕರು ಆಕೆಗೆ ಅದೇ ಗ್ರಾಮದ ಶಿವಾನಂದ್ ಎಂಬುವರ ಜೊತೆಗೆ ಮದುವೆ ಆಗಿತ್ತು.

## ಇಬ್ಬರು ಮಕ್ಕಳಿದ್ದರೂ ಅಕ್ರಮ ಸಂಬಂಧಕ್ಕೆ ಒತ್ತಾಯ

ಹೀಗಾಗಿ ಆನಂದ ಸಹ ಬೇರೊಂದು ಯುವತಿ ಜೊತೆ ಮದುವೆಯಾಗಿದ್ದನು.

ರೇಷ್ಮಾ ಮತ್ತು ಶಿವಾನಂದ್ ದಂಪತಿಗೆ ಇಬ್ಬರು ಮಕ್ಕಳಿದ್ದರೆ ಆನಂದ್ ದಂಪತಿಗೂ ಮೂವರು ಮಕ್ಕಳಿದ್ದಾರೆ. ಆದರೆ ರೇಷ್ಮಾ ಮತ್ತು ಆನಂದ್ ನಡುವೆ ಸಂಬಂಧ ಅಕ್ರಮ ಸಂಬಂಧಕ್ಕೆ ತಿರುಗಿತ್ತು. ಈ ವಿಚಾರ ಶಿವಾನಂದ್ ಗೆ ತಿಳಿದು ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದರು. ನಂತರ ಪೊಲೀಸರು ಆನಂದ್ ಗೆ ಎಚ್ಚರಿಕೆ ನೀಡಿ ಕಳುಹಿಸಿದ್ದರು. ಬಳಿಕ ರೇಷ್ಮಾ ಆನಂದನಿಂದ ಅಂತರ ಕಾಯ್ದುಕೊಂಡಿದ್ದಳು. ಆದರೆ ಆನಂದ್ ರೇಷ್ಮಾಳನ್ನು ಪೀಡಿಸುತ್ತಿದ್ದು ಕೊಲೆಯ ಹಂತಕ್ಕೆ ಹೋಗಿದ್ದಾನೆ.

- ರೇಷ್ಮಾಳಿಗೆ 2 ಮಕ್ಕಳು, ಆನಂದನಿಗೆ 3 ಮಕ್ಕಳು
- ಅಕ್ರಮ ಸಂಬಂಧಕ್ಕೆ ಒಪ್ಪದ ಕಾರಣ ಚೂರಿಯಿಂದ ದಾಳಿ
- ರೇಷ್ಮಾಳನ್ನು 9 ಬಾರಿ ಇರಿದು ಕೊಲೆ
- ನಂತರ ಕೊಲೆಗಾರ ಆನಂದ್ ಆತ್ಮಹತ್ಯೆ

# ಮಹಾರಾಷ್ಟ್ರ ರಾಜ್ಯಪಾಲ ಸಿಪಿ ರಾಧಾಕೃಷ್ಣ NDA ಅಭ್ಯರ್ಥಿ



ನವದೆಹಲಿ: ತೀವ್ರ ಕುತೂಹಲ ಕೆರಳಿಸಿರುವ ಉಪ ರಾಷ್ಟ್ರಪತಿ ಚುನಾವಣೆಗೆ ಬಿಜೆಪಿ ನೇತೃತ್ವದ NDA ಮೈತ್ರಿಕೂಟ ತನ್ನ ಅಧಿಕೃತ ಅಭ್ಯರ್ಥಿ ಘೋಷಣೆ ಮಾಡಿದ್ದು, ಮಹಾರಾಷ್ಟ್ರ ರಾಜ್ಯಪಾಲ ಸಿಪಿ ರಾಧಾಕೃಷ್ಣ ಅವರ ಉಪ ರಾಷ್ಟ್ರಪತಿ ಹುದ್ದೆಗೆ ಎನ್ ಡಿಎ ಮೈತ್ರಿಕೂಟದ ಅಭ್ಯರ್ಥಿಯಾಗಿದ್ದಾರೆ ಎಂದು ಬಿಜೆಪಿ ಅಧ್ಯಕ್ಷ ಜೆಪಿ ನಡ್ಡಾ ಹೇಳಿದ್ದಾರೆ.

ಇದೇ ಸೆಪ್ಟೆಂಬರ್ 9 ರಂದು ನಡೆಯಲಿರುವ ಉಪರಾಷ್ಟ್ರಪತಿ ಚುನಾವಣೆಗೆ ಮಹಾರಾಷ್ಟ್ರ ರಾಜ್ಯಪಾಲ ಸಿ.ಪಿ. ರಾಧಾಕೃಷ್ಣನ್ ಅವರನ್ನು ರಾಷ್ಟ್ರೀಯ ಪ್ರಜಾಸತ್ತಾತ್ಮಕ ಒಕ್ಕೂಟ (NDA)ದ ಅಭ್ಯರ್ಥಿಯಾಗಿ ಭಾರತೀಯ ಜನತಾ ಪಕ್ಷ ಭಾನುವಾರ ಘೋಷಿಸಿದೆ.

ಪಕ್ಷದ ಪ್ರಧಾನ ಕಚೇರಿಯಲ್ಲಿ ನಡೆದ ಬಿಜೆಪಿಯ ಸಂಸದೀಯ ಮಂಡಳಿ ಸಭೆಯಲ್ಲಿ ರಾಧಾಕೃಷ್ಣನ್ ಅವರ ಹೆಸರನ್ನು ಅಂತಿಮಗೊಳಿಸಲಾಗಿದೆ. ಮೈತ್ರಿಕೂಟದ ಅಭ್ಯರ್ಥಿಯನ್ನು ಅಂತಿಮಗೊಳಿಸಲು ಎನ್‌ಡಿಎ ಪ್ರಧಾನಿ ನರೇಂದ್ರ ಮೋದಿ ಮತ್ತು ಪಕ್ಷದ ಬಿಜೆಪಿ ಅಧ್ಯಕ್ಷ ಜೆ.ಪಿ. ನಡ್ಡಾ ಅವರಿಗೆ ಅಧಿಕಾರ ನೀಡಿತ್ತು.

ಈ ಕುರಿತು ದೆಹಲಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಜೆಪಿ ನಡ್ಡಾ, 'ಮುಂದಿನ ಉಪಾಧ್ಯಕ್ಷರನ್ನು ಸರ್ವಾನುಮತದಿಂದ ಆಯ್ಕೆ ಮಾಡಬೇಕೆಂದು ನಾವು ಬಯಸುತ್ತೇವೆ, ನಾವು ವಿರೋಧ ಪಕ್ಷದ ನಾಯಕರನ್ನು ಸಂಪರ್ಕಿಸಿದ್ದೇವೆ" ಎಂದು ರಾಧಾಕೃಷ್ಣನ್ ಹೆಸರನ್ನು ಘೋಷಿಸುತ್ತಾ ನಡ್ಡಾ ಹೇಳಿದರು.

"ಸಿಪಿ. ರಾಧಾಕೃಷ್ಣನ್ ಒಬ್ಬ ಪರಿಪೂರ್ಣ ರಾಜಕಾರಣಿ ಎಂದು ಪರಿಗಣಿಸಲ್ಪಟ್ಟಿದ್ದಾರೆ. ತಮಿಳುನಾಡಿನಲ್ಲಿ ಸಮಾಜದ ಎಲ್ಲಾ ವರ್ಗಗಳಲ್ಲಿ ಗೌರವವನ್ನು ಹೊಂದಿದ್ದಾರೆ ಎಂದು ನಡ್ಡಾ ಹೇಳಿದರು.

ಜುಲೈ 21 ರಂದು ಮಾಜಿ ಉಪ ರಾಷ್ಟ್ರಪತಿ ಜಗದೀಪ್ ಧಂಖರ್ ಅವರ ಹಠಾತ್ ರಾಜೀನಾಮೆಯ ತೆರವಾಗಿದ್ದ ಉಪ ರಾಷ್ಟ್ರಪತಿ ಹುದ್ದೆಗೆ ಚುನಾವಣಾ ಆಯೋಗ ನಂತರ ಇದು ಬಂದಿದೆ. ಆರೋಗ್ಯ ಕಾರಣಗಳನ್ನು ಉಲ್ಲೇಖಿಸಿ ಸಂಸತ್ತಿನ ಮಳೆಗಾಲದ ಅಧಿವೇಶನದಲ್ಲಿ ಧಂಖರ್ ರಾಜೀನಾಮೆ ನೀಡಿದ್ದರು.

# ಮತಗಳ್ಳತನ ಆರೋಪಗಳಿಗೆ 7 ದಿನಗಳಲ್ಲಿ ಅಫಿಡವಿಟ್ ಸಲ್ಲಿಸಲು ಸೂಚನೆ



## "7 ದಿನಗಳಲ್ಲಿ ಅಫಿಡವಿಟ್ ಸಲ್ಲಿಸಿ, ಇಲ್ಲದಿದ್ದರೆ ದೇಶಕ್ಕೆ ಕ್ಷಮೆ ಕೇಳಿ"

ನವದೆಹಲಿ: ಚುನಾವಣಾ ಆಯೋಗ ಮತ್ತು ಮತದಾರರ ಪಟ್ಟಿಯ ಬಗ್ಗೆ ವಿಪಕ್ಷ ನಾಯಕ ರಾಹುಲ್ ಗಾಂಧಿ ಮಾಡಿರುವ ಆರೋಪಗಳು ಆಧಾರರಹಿತ ಮತ್ತು ಸುಳ್ಳು. ಒಂದು ವೇಳೆ ನಿಮ್ಮ ಆರೋಪಗಳಿಗೆ ಪುರಾವೆ ಇದ್ದರೆ, ಮುಂದಿನ 7 ದಿನಗಳಲ್ಲಿ ಅಫಿಡವಿಟ್ ಸಲ್ಲಿಸಿ, ಇಲ್ಲದಿದ್ದರೆ ಇಡೀ ದೇಶಕ್ಕೆ ಕ್ಷಮೆಯಾಚಿಸಬೇಕು ಎಂದು ರಾಹುಲ್ ಗಾಂಧಿಗೆ ಮುಖ್ಯ ಚುನಾವಣಾ ಆಯುಕ್ತ (CEC) ಜ್ಞಾನೇಶ್ ಕುಮಾರ್ ಸವಾಲು ಹಾಕಿದ್ದಾರೆ.

ಮತದಾರರ ಪಟ್ಟಿಯನ್ನು ಸ್ವಚ್ಛಗೊಳಿಸುವುದು ನಮ್ಮ ಜವಾಬ್ದಾರಿಯಾಗಿದೆ. ಆದರೆ ಬಿಹಾರದಲ್ಲಿ ನಮ್ಮ ಬೂತ್ ಮಟ್ಟದ ಅಧಿಕಾರಿಗಳು ಬೂತ್ ಮಟ್ಟದ ಏಜೆಂಟ್‌ಗಳು ಮತ್ತು ರಾಜಕೀಯ ಪಕ್ಷಗಳ ಸಹಯೋಗದೊಂದಿಗೆ ಕೆಲಸ ಮಾಡಿದ್ದಾರೆ ಎಂದು ಭಾರತದ ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಹೇಳಿದರು. ಚುನಾವಣಾ ಆಯೋಗದ ದತ್ತಾಂಶವಿಲ್ಲದ ಪಿಪಿಟಿಯನ್ನು ತೋರಿಸುವುದು, ತಪ್ಪು ವಿಶ್ಲೇಷಣೆ ಮಾಡುವುದು ಮತ್ತು ಮಹಿಳೆಯೊಬ್ಬರು ಎರಡು ಬಾರಿ ಮತ ಚಲಾಯಿಸಿದ್ದಾರೆ ಎಂದು ಹೇಳುವುದು ಬಹಳ ಗಂಭೀರ ಆರೋಪವಾಗಿದೆ ಎಂದು ಮುಖ್ಯ ಚುನಾವಣಾ ಆಯುಕ್ತರು ಹೇಳಿದರು. ಚುನಾವಣಾ ಆಯೋಗವು ಅಫಿಡವಿಟ್ ಇಲ್ಲದೆ ಅಂತಹ ಗಂಭೀರ ಆರೋಪಗಳ ಮೇಲೆ ಕ್ರಮ ತೆಗೆದುಕೊಳ್ಳಲು ಸಾಧ್ಯವಿಲ್ಲ, ಏಕೆಂದರೆ ಅದು ಸಂವಿಧಾನ ಮತ್ತು ಚುನಾವಣಾ ಆಯೋಗ ಎರಡಕ್ಕೂ ವಿರುದ್ಧವಾಗಿರುತ್ತದೆ ಎಂದು ಅವರು ಒತ್ತಿ ಹೇಳಿದರು.

ರಾಹುಲ್ ಗಾಂಧಿಯನ್ನು ಹೆಸರಿಸದೆ "ನನ್ನ ಎಲ್ಲಾ ಮತದಾರರನ್ನು ಅಪರಾಧಿಗಳಂತೆ ಬಿಂಬಿಸಿದರೆ ಅದನ್ನು ನೋಡಿಕೊಂಡು ಚುನಾವಣಾ ಆಯೋಗ ಮೌನವಾಗಿರಲು ಸಾಧ್ಯವಿಲ್ಲ? ನೀವು ವಿನಃಕಾರಣ ಆರೋಪಗಳು ಮಾಡಿದರೆ ನಡೆಯಲ್ಲ. ಅಫಿಡವಿಟ್ ನೀಡಬೇಕಾಗುತ್ತದೆ. ಇಲ್ಲದಿದ್ದರೆ ದೇಶಕ್ಕೆ ಕ್ಷಮೆಯಾಚನೆಯಾಗಬೇಕಾಗುತ್ತದೆ. ಮೂರನೇ ಆಯ್ಕೆ ಇಲ್ಲ. ಏಳು ದಿನಗಳಲ್ಲಿ ಅಫಿಡವಿಟ್ ಸಲ್ಲಿಸದಿದ್ದರೆ ಈ ಎಲ್ಲಾ ಆರೋಪಗಳು ಆಧಾರರಹಿತ ಎಂದರ್ಥ. ನಮ್ಮ ಮತದಾರರು ನಕಲಿ ಎಂದು ಯಾರು ಹೇಳುತ್ತಾರೋ ಅವರು ಕ್ಷಮೆಯಾಚಿಸಬೇಕು ಎಂದರು.

'ಈ ಪ್ರಶ್ನೆ ಬಂದಿದ್ದಕ್ಕೆ ನಿಮಗೆ ಹೇಳಲು ಬಯಸುತ್ತೇನೆ. ನಂಬಿ, ಮತದಾರರ ವಿಷಯದಲ್ಲಿ ಹೇಳುವುದಾದರೆ, ಶೇಕಡಾ 60ಕ್ಕಿಂತ ಹೆಚ್ಚು ಮತದಾನ ಭಾರತದಲ್ಲಿ ನಡೆಯುತ್ತದೆ. ವಿಶ್ವದ ದೊಡ್ಡ ಪ್ರಜಾಪ್ರಭುತ್ವ ದೇಶಗಳು ಸಹ ಇದನ್ನು ಯೋಚಿಸಲು ಸಾಧ್ಯವಿಲ್ಲ ಎಂದು ನಾನು ನಿಮಗೆ ಮೊದಲೇ ಹೇಳಿದ್ದೆ. ನಮ್ಮಲ್ಲಿ ವಿಶ್ವದ ಅತಿದೊಡ್ಡ ಮತದಾರರ ಪಟ್ಟಿ ಇದೆ. 90-100 ಕೋಟಿಗಳ ನಡುವೆ. ಅತಿದೊಡ್ಡ ಮತದಾರರ ಪಟ್ಟಿ, ಚುನಾವಣಾ ಕಾರ್ಯಕರ್ತರು ಅತಿದೊಡ್ಡ ಸೈನ್ಯ, ಅತಿ ಹೆಚ್ಚು ಜನರು ಮತದಾನ ಮಾಡುತ್ತಿದ್ದಾರೆ. ಪುರಾವೆ ನೀಡದೆ ಆರೋಪಗಳನ್ನು ಮಾಡುವುದು ಎಷ್ಟು ಸರಿ ಎಂದು ಪ್ರಶ್ನಿಸಿದರು.

ಮುಖ್ಯ ಚುನಾವಣಾ ಆಯುಕ್ತರು, 'ಬಹುಶಃ ಅದಕ್ಕಾಗಿಯೇ ಆಗಸ್ಟ್ 1 ರಿಂದ ಯಾವುದೇ ರಾಜಕೀಯ ಪಕ್ಷವು ಒಂದೇ ಒಂದು ಆಕ್ಷೇಪಣೆ ಸಲ್ಲಿಸಿಲ್ಲ. ಇದು ಕೇವಲ ಎರಡು ವಿಷಯಗಳನ್ನು ಅರ್ಥೈಸಬಲ್ಲದು. ಕರಡು ಪಟ್ಟಿ ಸಂಪೂರ್ಣವಾಗಿ ಸರಿಯಾಗಿದೆಯೇ?' ಚುನಾವಣಾ ಆಯೋಗ ಇದನ್ನು ಒಪ್ಪಿಕೊಳ್ಳುವುದಿಲ್ಲ, ಚುನಾವಣಾ ಆಯೋಗವು ಅದರಲ್ಲಿ ದೋಷಗಳಿರಬಹುದು ಎಂದು ಹೇಳುತ್ತಿದೆ. ಅದನ್ನು ಸರಿಪಡಿಸೋಣ, ಇನ್ನೂ 15 ದಿನಗಳು ಉಳಿದಿವೆ. ಸೆಪ್ಟೆಂಬರ್ 1ರ ನಂತರವೂ ಅದೇ ರೀತಿಯ ಆರೋಪಗಳು ಬರಲು ಪ್ರಾರಂಭಿಸಿದರೆ. ಯಾರು ಹೊಣೆ? ಪ್ರತಿ ಮಾನ್ಯತೆ ಪಡೆದ ಪಕ್ಷಕ್ಕೆ ಇನ್ನೂ 15 ದಿನಗಳು ಉಳಿದಿವೆ... ಸೆಪ್ಟೆಂಬರ್ 1ರ ಮೊದಲು ಅದರಲ್ಲಿರುವ ದೋಷಗಳನ್ನು ಎತ್ತಿ ತೋರಿಸಬೇಕೆಂದು ನಾನು ಎಲ್ಲಾ ರಾಜಕೀಯ ಪಕ್ಷಗಳಿಗೆ ಮನವಿ ಮಾಡುತ್ತೇನೆ. ಚುನಾವಣಾ ಆಯೋಗವು ಅವುಗಳನ್ನು ಸರಿಪಡಿಸಲು ಸಿದ್ಧವಾಗಿದೆ ಎಂದರು.

ಸುದ್ದಿ ಮತ್ತು ಜಾಹೀರಾತುಗಳಿಗಾಗಿ ಸಂಪರ್ಕಿಸಿ:
9538786812 / 9880655634

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.